ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಹೊಸದಾಗಿ ಸೃಜನೆ ಮಾಡುವ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

875 (922) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹೊಸ ಗ್ರಾಮ ಪಂಚಾಯಿತಿಗಳನ್ನು ಸೃಜನೆ ಮಾಡಲಾಗಿದೆ ; ಹೊಸ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರ ಕಲ್ಪಿಸಿರುವ ಮೂಲ ಸೌಕರ್ಯಗಳೇನು ; ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯಿತಿಗಳ ಪೈಕಿ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ನಿವೇಶನ ಮತ್ತು ಹೊಸ ಕಟ್ಟಡಗಳಿಗೆ ಮಂಜೂರಾತಿ ನೀಡಲಾಗಿದೆ ;

(ಇ) ನೂತನ ಗ್ರಾಮ ಪಂಚಾಯಿತಿಗಳು ಘೋಷಣೆಯಾಗಿ ಮೂರು ವರ್ಷಗಳು ಕಳೆದರೂ ಕಟ್ಟಡ, ಪೀಠೋಪಕರಣ, ಕಂಪ್ಯೂಟರ್ ಸೇರಿದಂತೆ ಮೂಲ ಸೌಕರ್ಯಕ್ಕಾಗಿ 20.00 ಲಕ್ಷ ಅನುದಾನ ನೀಡುವ ಸರ್ಕಾರದ ಭರವಸೆ ಕಾರ್ಯರೂಪಕ್ಕೆ ಬರದಿರಲು ಕಾರಣಗಳೇನು ;

(ಈ) ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯಿತಿಗಳಿಗೆ ಅಗತ್ಯ ಸಿಬ್ಬಂದಿ ನೇಮಕಾತಿ ಪೂರ್ಣಗೊಂಡಿದೆಯೇ ; ನೇಮಕವಾಗದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ?